# ಸದಾಶಿವ ವರದಿ ಜಾರಿಗೆ ದಲಿತ ಶಾಸಕರ ಒತ್ತಾಯ

## ಅಧಿವೇಶನದಲ್ಲಿ ಮಂಡಿಸಿ ಕೇಂದ್ರಕ್ಕೆ ಕಳಿಸಿ

ಬೆಂಗಳೂರು: ಇದೇ ತಿಂಗಳ 21ರಿಂದ ನಡೆಯಲಿರುವ ವಿಧಾನಸಭೆ ಅಧಿವೇಶನದಲ್ಲಿ



ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿ ಮಂಡಿಸಿ ಕೇಂದ್ರ ಸರ್ಕಾರದ ಅನುಮೋದನೆಗೆ ಕಳುಹಿಸಿಕೊಡುವಂತೆ ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ಅವರಿಗೆ ಮನವಿ ಮಾಡಲು ಮಾದಿಗ ಸಮುದಾಯದ ಜನಪ್ರತಿನಿಧಿಗಳ ಸಭೆ ನಿರ್ಣಯ ಕೈಗೊಂಡಿದೆ. ಗುರುವಾರ ಶಾಸಕರ ಭವನದ ಸಮ್ಮೇಳನ ಸಭಾಂಗಣದಲ್ಲಿ ನ್ಯಾ.ಎ.ಜೆ.ಸದಾಶಿವ ಆಯೋಗದ ವರದಿ ಜಾರಿಗೊಳಿಸುವಂತೆ ಒತ್ತಾಯಿಸಲು ಮಾಜಿ ಸಚಿವ ಎಚ್.ಆಂಜನೇಯ ಹಾಗೂ ಸಂಸದ ನಾರಾಯಣಸ್ವಾಮಿ ಅವರ ನೇತೃತ್ವದಲ್ಲಿ ಮಾದಿಗ ಸಮುದಾಯದ ಜನಪ್ರತಿನಿಧಿಗಳ ಸಭೆ ನಡೆಯಿತು. ಸಭೆಯಲ್ಲಿ ಎ.ಜೆ.ಸದಾಶಿವ ಆಯೋಗದ ವರದಿ ಜಾರಿ ಹೋರಾಟಕ್ಕೆ ಪೂರಕವಾಗಿ ಬಲಗೈ ಸಮುದಾಯದ ಪ್ರಮುಖ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಡಾ.ಜಿ.ಪರಮೇಶ್ವರ್, ಶ್ರೀನಿವಾಸ್ ಪ್ರಸಾದ್ ಹಾಗೂ ಎಚ್.ಸಿ.ಮಹದೇವಪ್ಪ ಅವರನ್ನು ಭೇಟಿಯಾಗಿ ಹೋರಾಟಕ್ಕೆ ಬೆಂಬಲಿಸುವುದರ ಜತೆಗೆ ನ್ಯಾ.ಸದಾಶಿವ ಆಯೋಗದ ವರದಿ ಜಾರಿಗೊಳಿಸುವಂತೆ ಸರ್ಕಾರದ ಮೇಲೆ ಒತ್ತಡ ತರುವಂತೆ ಮನವಿ ಮಾಡಲು ತೀರ್ಮಾನಿಸಲಾಯಿತು.